(Off) +91(0821)2526301-59
(Fax) +91(0821) 2330166
e.mail: ceo_zp_mys@nic.in
admzpmys@gmail.com

ಜಿಲ್ಲಾ ಪಂಚಾಯತ್, ಮೈಸೂರು
ZILLA PANCHAYATH, MYSURU

ಸಂ: ಇಎಸ್‌ಟಿ (1)/33/2017-18 ದಿನಾಂಕ: 17.01.2018

# ಸುತ್ತೋಲೆ

**ಚುನಾವಣಾ ಜರೂರು**

**ವಿಷಯ:** 2018ರ ರಾಜ್ಯ ವಿಧಾನಸಭಾ ಚುನಾವಣೆಯನ್ನು ಯಶಸ್ವಿಯಾಗಿ ನಡೆಸಲು ಪೂರ್ವಸಿದ್ದತೆಗಳನ್ನು ಕೈಗೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರುರವರ ಪತ್ರ ಸಂ:ಗ್ರಾಅಪ/01/ಗ್ರಾವಿಯೋ/2018 ದಿ: 12.01.2018

* * *

2018ರ ಕರ್ನಾಟಕ ವಿಧಾನಸಭಾ ಚುನಾವಣೆಯು ಮುಂಬರುವ ತಿಂಗಳಲ್ಲಿ ನಡೆಯಲಿರುವ ಹಿನ್ನಲೆಯಲ್ಲಿ ದಿನಾಂಕ 10.01.2018ರಂದು ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯ ಕಾರ್ಯದರ್ಶಿಗಳು ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆ ನಡೆಸಿ, ಚುನಾವಣೆಯನ್ನು ಯಶಸ್ವಿಯಾಗಿ ನಡೆಸಲು ಪೋಲಿಂಗ್ ಬೂತ್‌ಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ತ್ವರಿತವಾಗಿ ಹಾಗೂ ಕಾಲಮಿತಿಯೊಳಗೆ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿರುವ ಹಿನ್ನಲೆಯಲ್ಲಿ, ಉಲ್ಲೇಖದ ಸರ್ಕಾರದ ಪತ್ರದಲ್ಲಿ ನೀಡಿರುವ ಸೂಚನೆಯನುಸಾರ ಈ ಕೆಳಕಂಡಂತೆ ಕ್ರಮ ವಹಿಸಲು ಸೂಚಿಸಲಾಗಿದೆ.

- ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ/ಸಿಬ್ಬಂದಿಗಳು ಮತ್ತು ಶಾಲಾ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ದೈನಂದಿನ ಕಾರ್ಯಗಳ ಜೊತೆಗೆ ಮತದಾರರಿಗೆ ವ್ಯವಸ್ಥಿತ ಚುನಾವಣೆ ಮತ್ತು ಚುನಾವಣೆಯಲ್ಲಿ ಪಾಲ್ಗೊಂಡು ಮತದಾನ ಮಾಡುವ ಬಗ್ಗೆ ಅರಿವಿನ ಶಿಕ್ಷಣವನ್ನು ನೀಡಲು ಅಗತ್ಯ ಕ್ರಮ ವಹಿಸುವುದು.
- ಪೋಲಿಂಗ್ ಬೂತ್‌ಗಳಿಗೆ ಚುನಾವಣಾ ಸಿಬ್ಬಂದಿ ಮತ್ತು ಮತದಾರರು ತೆರಳುವ ರಸ್ತೆ ಮಾರ್ಗಗಳನ್ನು ದುರಸ್ತಿಗೊಳಿಸಿ ಅವಶ್ಯ ಸಂಪರ್ಕ ರಸ್ತೆ ಕಲ್ಪಿಸುವುದು ಮತ್ತು ಅಗತ್ಯವಿರುವ ಅನುದಾನಕ್ಕೆ ಆಯಾ ಇಲಾಖೆಯಲ್ಲಿ ಲಭ್ಯವಿರುವ ಅನುದಾನಗಳನ್ನು ಬಳಸಿಕೊಳ್ಳುವಂತೆ ಮತ್ತು ಅಗತ್ಯವಿರುವೆಡೆ ಹೆಚ್ಚುವರಿ ಅನುದಾನಕ್ಕೆ ಜಿಲ್ಲಾ ಪಂಚಾಯತ್‌ನಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ನಿಯಮಿಸುವ ರೀತಿಯಲ್ಲಿ ಮರುಹೊಂದಾಣಿಕೆ ಮಾಡಿಕೊಳ್ಳುವುದು.
- ಚುನಾವಣಾ ಪ್ರಕ್ರಿಯೆಗಳನ್ನು ವೆಬ್‌ಕ್ಯಾಸ್ಟ್ ಮಾಡಲು ಬೇಕಾದ ಅಗತ್ಯ ಮೂಲಸೌಕರ್ಯಗಳನ್ನು ಎಲ್ಲಾ ಗ್ರಾಮ ಪಂಚಾಯತಿಗಳು ಹೊಂದತಕ್ಕದ್ದು.
- ಪೋಲಿಂಗ್ ಬೂತ್‌ಗಳಾಗಿ ಉಪಯೋಗಿಸಲ್ಪಡುವಂತಹ ಶಾಲಾ/ಕಾಲೇಜು/ಅಂಗನವಾಡಿ/ಇನ್ನಿತರೆ ಸರ್ಕಾರಿ ಕಟ್ಟಡಗಳಿಗೆ ತ್ವರಿತವಾಗಿ, ದುರಸ್ಥಿ ಕಾರ್ಯಗಳನ್ನು ಕೈಗೊಂಡು ವಿದ್ಯುಚ್ಛಕ್ತಿ ಸಂಪರ್ಕಗಳನ್ನು ಕಲ್ಪಿಸುವುದು, ಕುಡಿಯುವ ನೀರು ಮತ್ತು ನೀರು ಸಹಿತ ಶೌಚಾಲಯ ವ್ಯವಸ್ಥೆ ಕಲ್ಪಿಸುವುದು, ವಯಸ್ಕರು/ವಿಕಲಚೇತನರು ಪೋಲಿಂಗ್ ಬೂತ್‌ಗಳಿಗೆ ತೆರಳಿ ಮತದಾನ ಮಾಡಲು ಅನುವಾಗುವಂತೆ ರ್‍ಯಾಂಪ್‌ಗಳನ್ನು ಒದಗಿಸುವುದು. ಅಲ್ಲದೆ ಚುನಾವಣಾ ಕಾರ್ಯಗಳಿಗೆ ಉಪಯೋಗಿಸುವ ವಿವಿಧ ಇಲಾಖೆಯ ವಾಹನಗಳ ಸಣ್ಣಪುಟ್ಟ ದುರಸ್ಥಿ ಕಾರ್ಯಗಳನ್ನು ಕೈಗೊಂಡು ಸುಸ್ಥಿತಿಯಲ್ಲಿಡುವುದು.

ಈ ಮೇಲ್ಕಂಡ ಕ್ರಮಗಳನ್ನು ಚಾಚೂ ತಪ್ಪದೆ ಆದ್ಯತೆಯ ಮೇಲೆ ನಿರ್ವಹಿಸಲು ಹಾಗೂ ಕೈಗೊಂಡ ಕ್ರಮದ ಬಗ್ಗೆ ಜರೂರು ವರದಿ ಸಲ್ಲಿಸಲು ಸೂಚಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತ್, ಮೈಸೂರು.

ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

1.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ದಿ ಮತ್ತು ಪಂ.ರಾಜ್ ಇಲಾಖೆ ಬೆಂಗಳೂರು ರವರ ಮಾಹಿತಿಗಾಗಿ.
2.ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ರವರ ಮಾಹಿತಿಗಾಗಿ.
3.ಜಿಲ್ಲಾ ಪಂಚಾಯತ್ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ ಹಾಗೂ ಶಾಖೆಯ ಮುಖ್ಯಸ್ಥರುಗಳಿಗೆ.
4.ಜಿಲ್ಲೆಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ.
5.ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
6.ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯತ್ ಅಭಿವೃದ್ದಿ ಅಧಿಕಾರಿಗಳು/ಕಾರ್ಯದರ್ಶಿಗಳಿಗೆ (ಇ.ಒ ರವರ ಮುಖೇನ)

Scanned by CamScanner